**ಕರ್ನಾಟಕ ಸರ್ಕಾರದ ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು-01**

ಸಂಖ್ಯೆ:ಸಿ4(6)ಇತರೆ ಪರೀಕ್ಷೆ-27/2015-16 ದಿನಾಂಕ:14.12.2015

**ಸುತ್ತೋಲೆ**

ವಿಷಯ: ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಮೊರಾರ್ಜಿ ದೇಸಾಯಿ/ಕಿತ್ತೂರು ರಾಣಿ ಚೆನ್ನಮ್ಮ/ಏಕಲವ್ಯ ಮಾದರಿ/ಅಟಲ್ ಬಿಹಾರಿ ವಾಜಪೇಯಿ ವಸತಿ ಶಾಲೆಗಳಿಗೆ 2016-17ನೇ ಸಾಲಿಗೆ 6ನೇ ತರಗತಿಯತ ಪ್ರವೇಶ ಪರೀಕ್ಷೆ ನಡೆಸುವ ಕುರಿತು.

ಉಲ್ಲೇಖ: ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರ ಪತ್ರ ದಿನಾಂಕ:30.11.2015

*********

ವಿಷಯಕ್ಕೆ ಸಂಬಂಧಿಸಿದಂತೆ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಮೊರಾರ್ಜಿದೇಸಾಯಿ/ಕಿತ್ತೂರುರಾಣಿ ಚೆನ್ನಮ್ಮ/ಏಕಲವ್ಯ ಮಾದರಿ/ಅಟಲ್ ಬಿಹಾರಿ ವಾಜಪೇಯಿ ವಸತಿ ಶಾಲೆಗಳಿಗೆ 2016-17ನೇ ಸಾಲಿಗೆ 6ನೇ ತರಗತಿಯ ಪ್ರವೇಶ ಪರೀಕ್ಷೆಯನ್ನು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ನಡೆಸಲಾಗುತ್ತದೆ. ಈ ಪ್ರವೇಶ ಪರೀಕ್ಷೆಗೆ ಸಂಬಂಧಿಸಿದ ಅರ್ಜಿಗಳನ್ನು ತಾಲ್ಲೂಕು ಸಮಾಜ ಕಲ್ಯಾಣ ಅಧಿಕಾರಿಗಳ ಕಛೇರಿಯಲ್ಲಿ ಉಚಿತವಾಗಿ ವ್ಯವಸ್ಥೆ ಮಾಡಿದ್ದು, ಸದರಿ ಪ್ರವೇಶ ಅರ್ಜಿಗಳನ್ನು ವಸತಿ ಶಾಲೆಯ ಸಿಬ್ಬಂಧಿಗಳೇ ವಿತರಿಸುವುದರ ಬದಲಾಗಿ ಆಯಾ ತಾಲ್ಲೂಕಿನ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿಯಲ್ಲಿ ವಿತರಿಸಿದ್ದಲ್ಲಿ, ಇನ್ನೂ ಹೆಚ್ಚಿನ ಅರ್ಜಿಗಳು ಬರುತ್ತವೆ. ಆದ್ದರಿಂದ ಸಂಬಂಧಪಟ್ಟ ಅಧಿಕಾರಿಗಳಿಗೆ ಪ್ರವೇಶ ಪರೀಕ್ಷೆ ನಡೆಸಲು ಸಹಕರಿಸುವಂತೆ ಸೂಕ್ತ ನಿರ್ದೇಶನ ನೀಡುವಂತೆ ಉಲ್ಲೇಖಿತಪತ್ರದಲ್ಲಿ ಕೋರಿರುತ್ತಾರೆ.

ಈ ಹಿನ್ನೆಲೆಯಲ್ಲಿ 2016-17ನೇ ಸಾಲಿನ 6ನೇ ತರಗತಿಯ ಮೊರಾರ್ಜಿ ದೇಸಾಯಿ/ಕಿತ್ತೂರು ರಾಣಿ ಚೆನ್ನಮ್ಮ/ಏಕಲವ್ಯ ಮಾದರಿ/ಅಟಲ್ ಬಿಹಾರಿ ವಾಜಪೇಯಿ ವಸತಿ ಶಾಲೆಗಳಿಗೆ ಪ್ರವೇಶ ಪರೀಕ್ಷಾ ಅರ್ಜಿಗಳನ್ನು, ನಿಮ್ಮ ವ್ಯಾಪ್ತಿಯ ಸಮಾಜ ಕಲ್ಯಾಣ ಇಲಾಖಾ ಸಹಯೋಗದೊಂದಿಗೆ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿಯಲ್ಲಿ ವಿತರಿಸುವಂತೆ ಕ್ರಮ ವಹಿಸಲು ತಿಳಿಸಿದೆ. ಈ ಬಗ್ಗೆ ಸ್ಥಳೀಯ ಪತ್ರಿಕೆಗಳಲ್ಲಿ, ಕಛೇರಿ ಸೂಚನಾ ಫಲಕದಲ್ಲಿ, ಮತ್ತು ಅಧೀನ ಶಾಲೆಗಳಿಗೆ ತಿಳಿಸುವ ಬಗ್ಗೆ, ವ್ಯಾಪಕ ಪ್ರಚಾರ ನೀಡಿ ಹೆಚ್ಚಿನ ಸಂಖ್ಯೆಯಲ್ಲಿ ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ವಿದ್ಯಾರ್ಥಿಗಳು ಹಾಜರಾಗುವಂತೆ ಕ್ರಮ ವಹಿಸಲು ತಿಳಿಸಿದೆ.

ನಿರ್ದೇಶಕರು(ಪ್ರೌಢಶಿಕ್ಷಣ)

**ಗೆ,**

1.ರಾಜ್ಯದ ಎಲ್ಲಾ ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕರು(ಆಡಳಿತ)ಇವರುಗಳಿಗೆ, ಸೂಕ್ತ ಕ್ರಮಕ್ಕಾಗಿ.
2.ರಾಜ್ಯದ ಎಲ್ಲಾ ಸಾರ್ವಜನಿಕ ಶಿಕ್ಷಣ ಇಲಾಖೆಯ ಕ್ಷೇತ್ರಶಿಕ್ಷಣಾಧಿಕಾರಿಗಳು ಇವರುಗಳಿಗೆ, ಸೂಕ್ತ ಕ್ರಮಕ್ಕಾಗಿ.

**ಪ್ರತಿಯನ್ನು:**

1.ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ,ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ,ಕರ್ನಾಟಕ ಸರ್ಕಾರ ಸಚಿವಾಲಯ ಕೊಠಡಿ ಸಂಖ್ಯೆ:203,2ನೇ ಮಹಡಿ ವಿಕಾಸ ಸೌಧ, ಬೆಂಗಳೂರು-01 ಇವರಿಗೆ ಮಾಹಿತಿಗಾಗಿ ಸಲ್ಲಿಸಿದೆ.